All India Radio: Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

16.06.2025 2.30 P.M.

**********

ಮುಖ್ಯಾಂಶಗಳು :

- ಕೇಂದ್ರ ಸರ್ಕಾರದ ಜಾತೀವಾರು ಜನಗಣತಿಗೆ ರಾಜ್ಯ ಸರ್ಕಾರದ ಯಾವುದೇ ತಕರಾರು ಇಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ಇಸ್ರೇಲ್-ಇರಾನ್ ಸಂಘರ್ಷ; ಕನ್ನಡಿಗರಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ನೆರವಿನ ಅಭಯ
- ರಾಜ್ಯದ ಶಾಲೆಗಳಲ್ಲಿ ಈ ವರ್ಷದಿಂದ ವಾರಕ್ಕೆ ಎರಡು ದಿನ ನೈತಿಕ ಶಿಕ್ಷಣ ಬೋಧನೆ - ಶಿಕ್ಷಣ ಸಚಿವ ಮಧು ಬಂಗಾರಪ್ಪ
- ರಾಜ್ಯದ ಕರಾವಳಿ, ಘಟ್ಟ ಪ್ರದೇಶದಲ್ಲಿ ಮುಂದುವರಿದ ಮಳೆ ; ಜಲಾಶಯಗಳ ನೀರಿನ ಪ್ರಮಾಣ ಹೆಚ್ಚಳ

><><><><><><><><

ಕೇಂದ್ರ ಸರ್ಕಾರದ ಜಾತಿವಾರು ಜನಗಣತಿಗೆ ರಾಜ್ಯ ಸರ್ಕಾರದ ಯಾವುದೇ ತಕರಾರು ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ದಾವಣಗೆರೆ ಸರ್ಕೀಟ್ ಹೌಸ್‌ನಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳ ಮತ್ತು ಸಾರ್ವಜನಿಕರ ಅಹವಾಲು ಸ್ವೀಕರಿಸಿದ ನಂತರ ಸುದ್ದಿಗಾರರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ನಡೆಸುವುದು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಗಣತಿ ಮಾತ್ರ ಎಂದು ತಿಳಿಸಿದರು. ರಾಜ್ಯದ ಜನರಿಗೆ ಸಾಮಾಜಿಕ ನ್ಯಾಯ ಒದಗಿಸಬೇಕಾದರೆ, ಸಾಮಾಜಿಕ ಶೈಕ್ಷಣಿಕ ಗಣತಿ ಮುಖ್ಯ. ಕೇಂದ್ರ ಸರ್ಕಾರ ಜಾತಿವಾರು ಜನಗಣತಿ ನಡೆಸಲಿದ್ದು, ಇದಕ್ಕೆ ರಾಜ್ಯದ ಯಾವುದೇ ತಕರಾರು ಇಲ್ಲ ಎಂದರು. ಹಿಂದಿನ ಗಣತಿಗೆ ರಾಜ್ಯದ ಪ್ರಬಲರು ಮತ್ತು ದುರ್ಬಲ ವರ್ಗದವರು ಆಕ್ಷೇಪಣೆ ವ್ಯಕ್ತಪಡಿಸಿದ್ದಾರೆ. ಎಲ್ಲಕ್ಕಿಂತ ಮುಖ್ಯವಾಗಿ ಈ ಗಣತಿ ನಡೆದು ಹತ್ತು ವರ್ಷ ಆಗಿರುವುದರಿಂದ ಹಿಂದುಳಿದ ವರ್ಗಗಳ ಕಾಯಿದೆ-ಸೆಕ್ಷನ್ ೧೨ ರ ಪ್ರಕಾರ ಮರುಗಣತಿಗೆ ರಾಜ್ಯ ಸರ್ಕಾರ ತೀರ್ಮಾನಿಸಿದ್ದು, ಕೂಡಲೇ ಗಣತಿ ಆರಂಭಿಸಲು ಶಾಶ್ವತ ಹಿಂದುಳಿದ ವರ್ಗಗಳ ಆಯೋಗಕ್ಕೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಹಿತಿ ನೀಡಿದ್ದಾರೆ.

# ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

><><><><><><><><

ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಇಂದು ೧ ಸಾವಿರದ ೩೫೦ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಮತ್ತು ಫಲಾನುಭವಿಗಳಿಗೆ ಸರ್ಕಾರದ ಸವಲತ್ತುಗಳನ್ನು ವಿತರಿಸಲಿದ್ದಾರೆ. ಜಿಲ್ಲಾ ಆಯುಷ್ ಕಚೇರಿ ಸಂಯುಕ್ತ ಕಟ್ಟಡ ನಿರ್ಮಾಣ, ಸ್ವಚ್ಛ ಭಾರತ್ ಯೋಜನೆಯಡಿ ಒಳಚರಂಡಿ ಪೌರಕಾರ್ಮಿಕರ ವಿಶ್ರಾಂತಿ ಗೃಹ, ಶೌಚಾಲಯ, ಇಂದಿರಾ ಕ್ಯಾಂಟಿನ್, ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿ ಮನೆಗಳ ನಿರ್ಮಾಣಕ್ಕೆ ಗುದ್ದಲಿ ಪೂಜೆ, ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗಳ ನಿರ್ಮಾಣಕ್ಕೆ ಗುದ್ದಲಿ ಪೂಜೆ ಸೇರಿದಂತೆ ೧ ಸಾವಿರದ ೩೫೦ ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ.ಜಿ.ಪರಮೇಶ್ವರ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಅನೇಕ ಸಚಿವರು, ಶಾಸಕರು ಭಾಗವಹಿಸಲಿದ್ದಾರೆ.

><><><><><><><><

ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದಿಂದಾಗಿ ಪ್ರಸ್ತುತ ಇಸ್ರೇಲ್‌ನಲ್ಲಿ ಸಿಲುಕಿರುವ ಹಲವಾರು ಕನ್ನಡಿಗರೊಂದಿಗೆ ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ, ವಿಡಿಯೋ ಕರೆ ಮಾಡಿ, ಅವರ ಯೋಗಕ್ಷೇಮ, ಸುರಕ್ಷತೆ ಬಗ್ಗೆ ಮಾಹಿತಿ ಪಡೆದಿದ್ದಾರೆ. ಮಾತುಕತೆ ಸಮಯದಲ್ಲಿ ಸಚಿವರು, ಭಾರತ ಸರ್ಕಾರದಿಂದ ಸಂಪೂರ್ಣ ಬೆಂಬಲದ ಭರವಸೆ ನೀಡಿದರು. ಜನರು ಸುರಕ್ಷಿತವಾಗಿ ಮತ್ತು ತ್ವರಿತವಾಗಿ ತಾಯ್ನಾಡಿಗೆ ಮರಳುವುದನ್ನು ಖಚಿತಪಡಿಸಿಕೊಳ್ಳಲು ವಿದೇಶಾಂಗ ಸಚಿವಾಲಯದೊಂದಿಗೆ ಈ ವಿಷಯವನ್ನು ತಕ್ಷಣವೇ ಚರ್ಚಿಸುವುದಾಗಿ ಸಚಿವರು ಹೇಳಿದರು. ವಿಡಿಯೋ ಕರೆಯ ಮೂಲಕ ಮಾತನಾಡಿದ ಎಲ್ಲಾ ಕನ್ನಡಿಗರು, ತಾವು ಸುರಕ್ಷಿತವಾಗಿದ್ದು, ಟೆಲ್ ಅವೀವ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಅಧಿಕಾರಿಗಳು ಅಗತ್ಯವಿರುವ ಎಲ್ಲಾ ಸಹಾಯವನ್ನು ನೀಡುತ್ತಿದ್ದಾರೆ ಎಂದು ಸಚಿವರಿಗೆ ತಿಳಿಸಿದರು. ಭಾರತ ಸರ್ಕಾರ, ವಿದೇಶದಲ್ಲಿರುವ ಭಾರತೀಯ ಪ್ರಜೆಗಳ ಸುರಕ್ಷತೆ ಮತ್ತು ಯೋಗಕ್ಷೇಮ ಖಚಿತಪಡಿಸಿಕೊಳ್ಳಲು ಎಲ್ಲಾ ನೆರವನ್ನು ನೀಡಲಿದೆ ಎಂದು ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು. ಇದೇ ವೇಳೆ ರಾಜ್ಯ ಸರ್ಕಾರದ ಸಂಬಂಧ ಪಟ್ಟ ಅಧಿಕಾರಿಗಳು ಇರಾನಿನಲ್ಲಿ ನೆಲೆಸಿರುವ ವಿದ್ಯಾರ್ಥಿಗಳನ್ನು ಕೂಡಲೇ ಕರೆ ತರಲು ಅಲ್ಲಿನ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ಪರಿಸ್ಥಿತಿ ಅವಲೋಕಿಸುತ್ತಿದ್ದಾರೆ.

><><><><><><><><

ಮಕ್ಕಳಲ್ಲಿ ನೈತಿಕ ಶಿಕ್ಷಣದ ಕೊರತೆ ಇರುವುದರಿಂದ ಈ ವರ್ಷದಿಂದ ವಾರಕ್ಕೆ ಎರಡು ದಿನ ನೀತಿ ಪಾಠಗಳನ್ನು ಬೋಧಿಸಲಾಗುವುದು. ನೀತಿ ವಿಜ್ಞಾನ ಎಂಬ ಪಠ್ಯದ ಬೋಧನೆ ಜಾರಿಗೆ ತರಲಾಗುತ್ತಿದ್ದು, ಪಠ್ಯ ಸಿದ್ಧಗೊಂಡಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಬಳ್ಳಾರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಳ ಮೀಸಲಾತಿ ಬಗ್ಗೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರ ಸಮಿತಿ ವರದಿ ನೀಡಿದ ಬಳಿಕ ೧೩ ಸಾವಿರ ಶಿಕ್ಷಕರ ನೇಮಕ ಮಾಡಲಾಗುವುದು. ಅಲ್ಲದೇ ಅನುದಾನಿತ ಶಾಲೆಗಳಲ್ಲಿನ ಶಿಕ್ಷಕರ ನೇಮಕಕ್ಕೆ ಸಹ ಅನುಮೋದನೆ ನೀಡಲಾಗುವುದು ಎಂದು ಹೇಳಿದರು. ೧೯೯೫ರ ನಂತರ ಕನ್ನಡ ಮಾಧ್ಯಮಗಳ ಶಾಲೆಗಳನ್ನು ಅನುದಾನಿತ ಶಾಲೆಗಳನ್ನಾಗಿ ಮಾಡಿಲ್ಲ. ಅವುಗಳನ್ನು ಈ ವರ್ಷ ಅನುದಾನಿತ ಶಾಲೆಗಳನ್ನಾಗಿ ಮಾಡಲು ಮುಖ್ಯಮಂತ್ರಿಗಳ ಜೊತೆ ಚರ್ಚೆ ಮಾಡಲಾಗುವುದು ಎಂದರು.

><><><><><><><><

ದೇಶದಲ್ಲಿ ಎಲ್ಲಿಯವರೆಗೆ ಹಣ ತೆಗೆದುಕೊಂಡು, ಮತ ಹಾಕುವ ವ್ಯವಸ್ಥೆ ಇರುವವರೆಗೆ ರಾಜಕೀಯ ಮೌಲ್ಯ ಹುಡುಕುವುದು ಅಸಾಧ್ಯ ಎಂದು ವಿಧಾನ ಪರಿಷತ್ ಅಧ್ಯಕ್ಷ ಬಸವರಾಜ್ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ. ಬಳ್ಳಾರಿ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಿನ ಶಾಸಕರು ಸದನದಲ್ಲಿ ಪ್ರಶ್ನೆ ಕೇಳುತ್ತಾರೆ. ಉತ್ತರ ಹೇಳುವಾಗ ಅವರೇ ಇರುವುದಿಲ್ಲ. ಹಿಂದೆ ಸದನ ಆರಂಭವಾಗಿ ಮುಗಿಯುವವರೆಗೂ ಶಾಸಕರು ಇರುತ್ತಿದ್ದರು. ಇವತ್ತು ಅದು ಉಳಿದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಕಳೆದ ಡಿಸೆಂಬರ್ ೧೯ರಂದು ಬೆಳಗಾವಿಯ ಸುವರ್ಣ ಸೌಧದಲ್ಲಿ ಸದನ ಇಲ್ಲದ ವೇಳೆ ಸಿ.ಟಿ.ರವಿ ಮತ್ತು ಲಕ್ಷ್ಮಿ ಹೆಬ್ಬಾಳ್ಕರ್ ನಡುವಿನ ಘಟನೆ ನಡೆದಿತ್ತು. ನೈತಿಕ ಮೌಲ್ಯಗಳ ಸಮಿತಿಗೆ ಈ ದೂರನ್ನು ವರ್ಗಾಯಿಸಲಾಗಿದೆ ಎಂದು ಬಸವರಾಜ್ ಹೊರಟ್ಟಿ ಮಾಹಿತಿ ನೀಡಿದರು.

><><><><><><><><

ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಾಧಾರಣದಿಂದ ಹೆಚ್ಚು ಮಳೆಯಾಗುತ್ತಿದೆ. ಕಡೂರು, ತರೀಕೆರೆ ಭಾಗದಲ್ಲಿ ಸಾಧರಣ ಮಳೆಯಾದರೆ, ಮಲೆನಾಡು ಭಾಗದಲ್ಲಿ ಗಾಳಿ ಸಹಿತ ಮಳೆಯಾಗುತ್ತಿದೆ. ಜಿಲ್ಲೆಯಲ್ಲಿ ಕಳೆದೆರಡು ದಿನದಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ೩೪.೪ ಮಿಲಿ ಮೀಟರ್ ಮಳೆಯಾಗಿದೆ. ಗಾಳಿ-ಮಳೆಯಿಂದ ಜಿಲ್ಲೆಯ ಬಾಳೆಹೊನ್ನೂರು ಸಮೀಪದ ಎಲೆಕಲ್ಲು ಗ್ರಾಮದ ಬಳಿ ಮರದ ರೆಂಬೆಯೊಂದು ಬೈಕ್ ಸವಾರನ ಮೇಲೆ ಬಿದ್ದು, ಬೈಕಿನಲ್ಲಿ ತೆರಳುತ್ತಿದ್ದ ಅನಿಲ್ ರುಜಾರಿಯೋ ಎಂಬುವವರು ಮೃತಪಟ್ಟಿದ್ದಾರೆ. ಮುಳ್ಳಯ್ಯನಗಿರಿಗೆ ತೆರಳುವ ಕೈಮರ ಚೆಕ್ ಪೋಸ್ಟ್ ಸಮೀಪ ಬೃಹತ್ ಮರವೊಂದು ರಸ್ತೆಗೆ ಉರುಳಿಬಿದ್ದಿದ್ದು, ಸ್ಥಳಕ್ಕೆ ಅಧಿಕಾರಿಗಳು, ಸಿಬ್ಬಂದಿ

ತೆರಳಿ, ಮರ ತೆರವುಗೊಳಿಸಿದ್ದಾರೆ. ಕೊಪ್ಪ ತಾಲೂಕಿನ ಮೇಗೂರು ಬಳಿ ಬೃಹತ್ ಮರವೊಂದು ಬುಡಸಹಿತ ರಸ್ತೆಗೆ ಉರುಳಿಬಿದ್ದಿದ್ದು, ಸ್ಥಳಕ್ಕೆ ಪೊಲೀಸರು ಹಾಗೂ ಸಿಬ್ಬಂದಿ ತೆರಳಿ, ಮರವನ್ನು ತೆರವುಗೊಳಿಸಿದ್ದಾರೆ. ಮಳೆ ಹಿನ್ನಲೆಯಲ್ಲಿ ಇಂದು ಜಿಲ್ಲೆಯ ಮಲೆನಾಡು ಭಾಗದ ಶಾಲೆಗಳಿಗೆ ರಜೆ ನೀಡಲಾಗಿದೆ. ಇನ್ನು ಜಿಲ್ಲೆಯಲ್ಲಿ ಗಾಳಿ ಸಹಿತ ಮಳೆಯಾಗುತ್ತಿರುವ ಕಾರಣ, ಪ್ರವಾಸಿಗರು ಜಿಲ್ಲೆಗೆ ಭೇಟಿ ನೀಡುವುದನ್ನು ಮುಂದೂಡುವುದು ಸೂಕ್ತ ಎಂದು ಜಿಲ್ಲಾಡಳಿತ ಮನವಿ ಮಾಡಿದೆ.ಭಾರೀ ಮಳೆ ಹಿನ್ನೆಲೆಯಲ್ಲಿ ಸಾಗರ ಮತ್ತು ಹೊಸನಗರ ತಾಲೂಕುಗಳಲ್ಲಿ ಇಂದು ಅಂಗನವಾಡಿ, ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ರಜೆ ನೀಡಲಾಗಿದೆ. ರಾಜ್ಯದ ಪ್ರಮುಖ ಜಲಾಶಯವಾದ ಲಿಂಗನಮಕ್ಕಿಗೆ, ನೀರುಣಿಸುವ ಪ್ರಧಾನ ಜಲಾನಯನ ಪ್ರದೇಶವಾದ ಹೊಸನಗರ ತಾಲೂಕಿನಾದ್ಯಂತ ಮಳೆ ಮುಂದುವರೆದಿದ್ದು, ಮಾಣಿ ಅಣೆಕಟ್ಟು ಪ್ರದೇಶದಲ್ಲಿ ಕಳೆದ ೨೪ ಗಂಟೆಗಳಲ್ಲಿ ರಾಜ್ಯದಲ್ಲೇ ಅತ್ಯಧಿಕ ೩೦೭ ಮಿಲಿಮೀಟರ್ ಮಳೆ ದಾಖಲಾಗಿದೆ. ೧ ಸಾವಿರದ ೮೧೯ ಅಡಿ ಗರಿಷ್ಠ ಮಟ್ಟದ ಲಿಂಗನಮಕ್ಕಿ ಜಲಾಶಯದ ನೀರಿನ ಮಟ್ಟ ೧ ಸಾವಿರದ ೭೮೭.೪೦ ಅಡಿ ತಲುಪಿದೆ. ಕಳೆದ ವರ್ಷ ಇದೇ ಅವಧಿಗೆ ೧  ಸಾವಿರದ ೭೪೫.೨೫ ಅಡಿ ದಾಖಲಾಗಿದ್ದು, ಜಲಾಶಯಕ್ಕೆ ೩೯ ಸಾವಿರದ ೯೭೧ ಕ್ಯೂಸೆಕ್ ನೀರು ಹರಿದು ಬರುತ್ತಿದೆ.

><><><><><><><><

ರಾಜ್ಯದ ವಿವಿಧೆಡೆ ಇಂದು ಮಳೆಯಾಗಿದೆ. ಉತ್ತರ ಕನ್ನಡದಲ್ಲಿ ೨೭ ಸೆಂಟಿ ಮೀಟರ್, ಸಿದ್ಧಾಪುರದಲ್ಲಿ ೨೮, ಮಂಗಳೂರಿನಲ್ಲಿ ೨೩ ಸೆಂಟಿ ಮೀಟರ್ ಮಳೆಯಾಗಿದೆ. ಇಂದು ಮತ್ತು ನಾಳೆ ಕರಾವಳಿ ಜಿಲ್ಲೆಗಳು, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗಿನ ಕೆಲವು ಸ್ಥಳಗಳಲ್ಲಿ ಧಾರಾಕಾರ ಮಳೆಯಾಗಲಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಬೆಳಗಾವಿ, ಹಾಸನದಲ್ಲಿಯೂ ಮಳೆಯಾಗಲಿದ್ದು, ಆರೆಂಜ್ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್.ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಡಾ. ಸಿ.ಎಸ್.ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ**

ಬೆಂಗಳೂರಿನಲ್ಲಿ ಇಂದು ನಾಳೆ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

><><><><><><><><

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ತೀವ್ರ ಅತಿಸಾರದಿಂದ ಮಕ್ಕಳ ಮರಣವನ್ನು ಶೂನ್ಯಕ್ಕೆ ತರುವುದನ್ನು ಗುರಿಯಾಗಿಸಿ, 'ಅತಿಸಾರ ನಿಲ್ಲಿಸಿ ಅಭಿಯಾನ-೨೦೨೫'

ಅನ್ನು ಇಂದಿನಿಂದ ಜುಲೈ ೩೧ ರವರೆಗೆ ನಡೆಸಲಾಗುತ್ತಿದೆ. ಅಭಿಯಾನಕ್ಕೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ ಇಂದು ಚಾಲನೆ ನೀಡಲಾಯಿತು.

><><><><><><><><

ಪ್ರಸಕ್ತ ಸಾಲಿನಲ್ಲಿ ಕೋಲಾರ ಜಿಲ್ಲೆಯಲ್ಲಿ ಮಾವು ಬೆಲೆ ಕುಸಿತದಿಂದ ಮಾವು ಬೆಳೆಗಾರರಿಗೆ ಉಂಟಾಗಿರುವ ಸಂಕಷ್ಟವನ್ನು ಪರಿಹರಿಸಲು, ಜಿಲ್ಲೆಯಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಹಾಗೂ ಸಂಸ್ಕರಣ ಘಟಕಗಳಲ್ಲಿ ಸಂಗ್ರಹವಾಗುವ ಮಾವು ಹಾಗೂ ದರವನ್ನು ಸೂಕ್ತ ರೀತಿಯಲ್ಲಿ ಮೇಲ್ವಿಚಾರಣೆ ಮಾಡಿ, ವರದಿ ನೀಡಲು ಅಧಿಕಾರಿಗಳನ್ನು ನಿಯೋಜಿಸಿ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಆದೇಶಿಸಿದ್ದಾರೆ.

><><><><><><><><